ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

(ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು)

E-Mail :- dudc_burban@yahoo.com
Phone No-08022211372/352

ದಿನಾಂಕ: -11-2019

ಸಂಖ್ಯೆ: ಜಿನಕೋ/ಸಾಮಾನ್ಯ-02/ಸಿಆರ್/43/2019-20

## ಅಧಿಸೂಚನೆ

ಬೆಂಗಳೂರು ನಗರ ಜಿಲ್ಲೆಯ ಹೆಬ್ಬಗೋಡಿ ನಗರಸಭೆಯಲ್ಲಿ ಖಾಲಿ ಇರುವ ಈ ಕೆಳಕಂಡ ಪೌರಕಾರ್ಮಿಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ ಅಥವಾ ಹೆಬ್ಬಗೋಡಿ ನಗರಸಭೆಯಲ್ಲಿ ಪಡೆಯಬಹುದು. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆಸಲ್ಲಿಸುವ ಅಭ್ಯರ್ಥಿಗಳು ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ಸಂಬಂಧಪಟ್ಟ ಪೌರಾಯುಕ್ತರು/ ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಲಗತ್ತಿಸಬೇಕು ಹಾಗೂ ಸದರಿ ಪೌರಕಾರ್ಮಿಕರನ್ನು ಹೊರತುಪಡಿಸಿ ಇನ್ನಿತರೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ, ವಯಸ್ಸಿಗೆ ಸಂಬಂಧಿಸಿದಂತೆ ನಿಗಧಿಪಡಿಸಲಾದ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ದೃಢೀಕರಿಸಿಕೊಂಡು ಅವುಗಳನ್ನು ಅರ್ಜಿಯೊಂದಿಗೆ ಲಗತ್ತಿಸಿ, ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ ಇಲ್ಲಿ ದಿನಾಂಕ:06-01-2020ರ ಸಂಜೆ 5.30ರೊಳಗೆ ಸಲ್ಲಿಸತಕ್ಕದ್ದು.

| ಕ್ರ.ಸಂ | ಹುದ್ದೆಯ ಹೆಸರು | ಖಾಲಿ ಹುದ್ದೆ | ಕನಿಷ್ಠ ವಿದ್ಯಾರ್ಹತೆ/ ಅರ್ಹತೆ | ವೇತನ |
|---|---|---|---|---|
| 1 | ಪೌರಕಾರ್ಮಿಕರು | 122 | 1. ಕನ್ನಡ ಮಾತನಾಡಲು ಗೊತ್ತಿರಬೇಕು<br>2. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆ ಸಲ್ಲಿಸುತ್ತಿರುವವರಿಗೆ ಆದ್ಯತೆ.<br>3. ಕನಿಷ್ಠ ವಯೋಮಿತಿ 18 ವರ್ಷ ದಿನಾಂಕ: 02-12-2019ಕ್ಕೆ ಇರುವಂತೆ.<br>4. ಗರಿಷ್ಠ ವಯಸ್ಸು 45 ವರ್ಷ ಇರತಕ್ಕದ್ದು ದಿನಾಂಕ:02-12-2019ಕ್ಕೆ ಇರುವಂತೆ.<br>5. ಅರ್ಜಿದಾರರ ಗರಿಷ್ಠ ವಯಸ್ಸಿಗೆ ಅನುಗುಣವಾಗಿ ನೇಮಕಾತಿಯಲ್ಲಿ ಆದ್ಯತೆ. | ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಲ್ಲಿ ನಿಗಧಿಪಡಿಸಿರುವ ಕನಿಷ್ಠ ವೇತನ. |

ಸೂಚನೆ:

1. ಹೆಚ್ಚಿನ ಮಾಹಿತಿ ಹಾಗೂ ವಿವರವಾದ ಅಧಿಸೂಚನೆಯನ್ನು ಆಯಾ ನಗರಸಭೆ/ಪುರಸಭೆಗಳಲ್ಲಿಯೂ ಸಹ ಪಡೆಯಬಹುದು.
2. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.
3. ಸದರಿ ನೇಮಕಾತಿಯು ಗುತ್ತಿಗೆ ಆಧಾರದ ತಾತ್ಕಾಲಿಕ ನೇಮಕಾತಿಯಾಗಿದ್ದು, ಈ ಗುತ್ತಿಗೆ ಆಧಾರದ ನೇಮಕತಿಯು ಪೌರಕಾರ್ಮಿಕರ ಖಾಯಂ ನೇಮಕಾತಿ ಆಗುವವರೆಗೆ ಅಥವಾ ಗುತ್ತಿಗೆ ಅವಧಿ ಮುಗಿಯುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಮುಂದುವರೆಸತಕ್ಕದ್ದು.

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ
ಬೆಂಗಳೂರು ನಗರ ಜಿಲ್ಲೆ.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.

Scanned by CamScanner

Scanned by CamScanner

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
(ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು)
E-Mail :- dudc_burban@yahoo.com Phone No-08022211372/352

ಸಂಖ್ಯೆ: ಜಿನಕೋ/ಸಾಮಾನ್ಯ-02/ಸಿಆರ್/43/2019-20 ದಿನಾಂಕ: -11-2019
02.12.19

# ಅಧಿಸೂಚನೆ

ಬೆಂಗಳೂರು ನಗರ ಜಿಲ್ಲೆಯ ಅತ್ತಿಬೆಲೆ ಪುರಸಭೆಯಲ್ಲಿ ಖಾಲಿ ಇರುವ ಈ ಕೆಳಕಂಡ ಪೌರಕಾರ್ಮಿಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ ಅಥವಾ ಅತ್ತಿಬೆಲೆ ಪುರಸಭೆಯಲ್ಲಿ ಪಡೆಯಬಹುದು. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆಸಲ್ಲಿಸಿರುವ ಅಭ್ಯರ್ಥಿಗಳು ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ಸಂಬಂಧಪಟ್ಟ ಪೌರಾಯುಕ್ತರು/ ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಲಗತ್ತಿಸಬೇಕು ಹಾಗೂ ಸದರಿ ಪೌರಕಾರ್ಮಿಕರನ್ನು ಹೊರತುಪಡಿಸಿ ಇನ್ನಿತರೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ, ವಯಸ್ಸಿಗೆ ಸಂಬಂಧಿಸಿದಂತೆ ನಿಗಧಿಪಡಿಸಲಾದ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ದೃಢೀಕರಿಸಿಕೊಂಡು ಅವುಗಳನ್ನು ಅರ್ಜಿಯೊಂದಿಗೆ ಲಗತ್ತಿಸಿ, ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ ಇಲ್ಲಿ ದಿನಾಂಕ:08-01-2020ರ ಸಂಜೆ 5.30ರೊಳಗೆ ಸಲ್ಲಿಸತಕ್ಕದ್ದು.

| ಕ್ರಸಂ | ಹುದ್ದೆಯ ಹೆಸರು | ಖಾಲಿ ಹುದ್ದೆ | ಕನಿಷ್ಠ ವಿದ್ಯಾರ್ಹತೆ/ ಅರ್ಹತೆ | ವೇತನ |
|---|---|---|---|---|
| 1 | ಪೌರಕಾರ್ಮಿಕರು | 19 | 1. ಕನ್ನಡ ಮಾತನಾಡಲು ಗೊತ್ತಿರಬೇಕು<br>2. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆ ಸಲ್ಲಿಸಿದ್ದವರಿಗೆ ಆದ್ಯತೆ.<br>3. ಕನಿಷ್ಠ ವಯೋಮಿತಿ 18 ವರ್ಷ ದಿನಾಂಕ: 02-12-2019ಕ್ಕೆ ಇರುವಂತೆ.<br>4. ಗರಿಷ್ಠ ವಯಸ್ಸು 45 ವರ್ಷ ಇರತಕ್ಕದ್ದು ದಿನಾಂಕ: 02-12-2019ಕ್ಕೆ ಇರುವಂತೆ.<br>5. ಅರ್ಜಿದಾರರ ಗರಿಷ್ಠ ವಯಸ್ಸಿಗೆ ಅನುಗುಣವಾಗಿ ನೇಮಕಾತಿಯಲ್ಲಿ ಆದ್ಯತೆ. | ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಲ್ಲಿ ನಿಗಧಿಪಡಿಸಿರುವ ಕನಿಷ್ಠ ವೇತನ. |

ಸೂಚನೆ:

1. ಹೆಚ್ಚಿನ ಮಾಹಿತಿ ಹಾಗೂ ವಿವರವಾದ ಅಧಿಸೂಚನೆಯನ್ನು ಆಯಾ ನಗರಸಭೆ/ಪುರಸಭೆಗಳಲ್ಲಿಯೂ ಸಹ ಪಡೆಯಬಹುದು.
2. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.
3. ಸದರಿ ನೇಮಕಾತಿಯು ಗುತ್ತಿಗೆ ಆಧಾರದ ತಾತ್ಕಾಲಿಕ ನೇಮಕಾತಿಯಾಗಿದ್ದು, ಈ ಗುತ್ತಿಗೆ ಆಧಾರದ ನೇಮಕತಿಯು ಪೌರಕಾರ್ಮಿಕರ ಖಾಯಂ ನೇಮಕಾತಿ ಆಗುವವರೆಗೆ ಅಥವಾ ಗುತ್ತಿಗೆ ಅವಧಿ ಮುಗಿಯುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಮುಂದುವರೆಸತಕ್ಕದ್ದು.

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ
ಬೆಂಗಳೂರು ನಗರ ಜಿಲ್ಲೆ.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.

Scanned by CamScanner
Scanned by CamScanner

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

(ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು)

E-Mail :- dudc_burban@yahoo.com Phone No-08022211372/352

ಸಂಖ್ಯೆ: ಜಿನಕೋ/ಸಾಮಾನ್ಯ-02/ಸಿಆರ್/43/2019-20 ದಿನಾಂಕ: -12-2019

02.12.19

## ಅಧಿಸೂಚನೆ

ಬೆಂಗಳೂರು ನಗರ ಜಿಲ್ಲೆಯ ಚಂದಾಪುರ ಪುರಸಭೆಯಲ್ಲಿ ಖಾಲಿ ಇರುವ ಈ ಕೆಳಕಂಡ ಪೌರಕಾರ್ಮಿಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ ಅಥವಾ ಚಂದಾಪುರ ಪುರಸಭೆಯಲ್ಲಿ ಪಡೆಯಬಹುದು. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆಸಲ್ಲಿಸಿರುವ ಅಭ್ಯರ್ಥಿಗಳು ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ಸಂಬಂಧಪಟ್ಟ ಪೌರಾಯುಕ್ತರು/ ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಲಗತ್ತಿಸಬೇಕು ಹಾಗೂ ಸದರಿ ಪೌರಕಾರ್ಮಿಕರನ್ನು ಹೊರತುಪಡಿಸಿ ಇನ್ನಿತರೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ, ವಯಸ್ಸಿಗೆ ಸಂಬಂಧಿಸಿದಂತೆ ನಿಗಧಿಪಡಿಸಲಾದ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ದೃಢೀಕರಿಸಿಕೊಂಡು ಅವುಗಳನ್ನು ಅರ್ಜಿಯೊಂದಿಗೆ ಲಗತ್ತಿಸಿ, ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ ಇಲ್ಲಿ ದಿನಾಂಕ: 06-01-2020ರ ಸಂಜೆ 5.30ರೊಳಗೆ ಸಲ್ಲಿಸತಕ್ಕದ್ದು.

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ಕನಿಷ್ಠ ವಿದ್ಯಾರ್ಹತೆ/ ಅರ್ಹತೆ | ವೇತನ |
|---|---|---|---|---|
| 1 | ಪೌರಕಾರ್ಮಿಕರು | 38 | 1. ಕನ್ನಡ ಮಾತನಾಡಲು ಗೊತ್ತಿರಬೇಕು<br>2. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆ ಸಲ್ಲಿಸಿದ್ದವರಿಗೆ ಆದ್ಯತೆ.<br>3. ಕನಿಷ್ಠ ವಯೋಮಿತಿ 18 ವರ್ಷ ದಿನಾಂಕ: 02-12-2019ಕ್ಕೆ ಇರುವಂತೆ.<br>4. ಗರಿಷ್ಠ ವಯಸ್ಸು 45 ವರ್ಷ ಇರತಕ್ಕದ್ದು ದಿನಾಂಕ:02-12-2019ಕ್ಕೆ ಇರುವಂತೆ.<br>5. ಅರ್ಜಿದಾರರ ಗರಿಷ್ಠ ವಯಸ್ಸಿಗೆ ಅನುಗುಣವಾಗಿ ನೇಮಕಾತಿಯಲ್ಲಿ ಆದ್ಯತೆ. | ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಲ್ಲಿ ನಿಗಧಿಪಡಿಸಿರುವ ಕನಿಷ್ಠ ವೇತನ. |

**ಸೂಚನೆ:**

1. ಹೆಚ್ಚಿನ ಮಾಹಿತಿ ಹಾಗೂ ವಿವರವಾದ ಅಧಿಸೂಚನೆಯನ್ನು ಆಯಾ ನಗರಸಭೆ/ಪುರಸಭೆಗಳಲ್ಲಿಯೂ ಸಹ ಪಡೆಯಬಹುದು.
2. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.
3. ಸದರಿ ನೇಮಕಾತಿಯು ಗುತ್ತಿಗೆ ಆಧಾರದ ತಾತ್ಕಾಲಿಕ ನೇಮಕಾತಿಯಾಗಿದ್ದು, ಈ ಗುತ್ತಿಗೆ ಆಧಾರದ ನೇಮಕಾತಿಯು ಪೌರಕಾರ್ಮಿಕರ ಖಾಯಂ ನೇಮಕಾತಿ ಆಗುವವರೆಗೆ ಅಥವಾ ಗುತ್ತಿಗೆ ಅವಧಿ ಮುಗಿಯುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಮುಂದುವರೆಸತಕ್ಕದ್ದು.

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ
ಬೆಂಗಳೂರು ನಗರ ಜಿಲ್ಲೆ.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.

Scanned by CamScanner

Scanned by CamScanner

## ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರನ್ನು ನೇಮಕಾತಿ ವಿಧಾನ:

1. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆ ಸಲ್ಲಿಸಿದ್ದವರಿಗೆ ಆದ್ಯತೆ ನೀಡಲಾಗುವುದು. ಪೌರಕಾರ್ಮಿಕರ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಆಯ್ಕೆ ಮಾಡಲಾಗುವುದು.
2. ಕನ್ನಡ ಮಾತನಾಡಲು ಗೊತ್ತಿರಬೇಕು.
3. ದಿನಾಂಕ: 02-12-2019ಕ್ಕೆ ಕನಿಷ್ಠ ವಯೋಮಿತಿ 18 ವರ್ಷ ಹಾಗೂ ಗರಿಷ್ಠ ವಯೋಮಿತಿ 45 ವರ್ಷಗಳು.
4. ಅರ್ಜಿದಾರರ ಗರಿಷ್ಠ ವಯಸ್ಸಿಗೆ ಅನುಗುಣವಾಗಿ ನೇಮಕಾತಿಯಲ್ಲಿ ಆದ್ಯತೆ ನೀಡುವುದು.
5. ಪೌರಕಾರ್ಮಿಕರ ಗುತ್ತಿಗೆ ಅವಧಿ 11 ತಿಂಗಳು.
6. ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯನ್ವಯ ಕನಿಷ್ಠ ವೇತನವನ್ನು ನೀಡಲಾಗುವುದು.
7. ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ/ವಿದ್ಯಾರ್ಹತೆ ದಾಖಲಾತಿಗಳು/ ಜನನ ಪ್ರಮಾಣ ಪತ್ರಗಳು ಆಧಾರ್ ಕಾರ್ಡ್ ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.
8. ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಮತ್ತೊಬ್ಬ ಅರ್ಹ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.
9. ತಯಾರಿಸಲಾದ ಆಯ್ಕೆ ಪಟ್ಟಿಯನ್ನು ನಗರಸಭೆಗಳು, ಪುರಸಭೆಗಳು ಮತ್ತು ಜಿಲ್ಲಾಧಿಕಾರಿಗಳ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು.
10. ಸದರಿ ನೇಮಕಾತಿಯು ಗುತ್ತಿಗೆ ಆಧಾರದ ತಾತ್ಕಾಲಿಕ ನೇಮಕಾತಿಯಾಗಿದ್ದು, ಈ ಗುತ್ತಿಗೆ ಆಧಾರದ ನೇಮಕಾತಿಯು ಪೌರಕಾರ್ಮಿಕರ ಖಾಯಂ ನೇಮಕಾತಿ ಆಗುವರೆಗೆ ಅಥವಾ ಗುತ್ತಿಗೆ ಅವಧಿ ಮುಗಿಯುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಮುಂದುವರೆಸಲಾಗುವುದು.

## ಅರ್ಜಿ ಸಲ್ಲಿಸುವ ವಿಧಾನ :

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗದಿತ ಅರ್ಜಿ ನಮೂನೆಯನ್ನು ಈ ಕಾರ್ಯಾಲಯದಿಂದ ಹಾಗೂ ಸಂಬಂಧಿಸಿದ ನಗರಸಭೆ/ ಪುರಸಭೆಗಳಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆ ಸಲ್ಲಿಸಿರುವ ಅಭ್ಯರ್ಥಿಗಳು ಈ ಸಂಬಂಧ ಆಯಾ ನಗರಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಸೇವೆ ಸಲ್ಲಿಸಿರುವ ಕುರಿತು ಸೇವಾ ದೃಢೀಕರಣ ಪತ್ರವನ್ನು ಪಡೆಯುವುದು ಮತ್ತು ವಯಸ್ಸಿಗೆ ಸಂಬಂಧಿಸಿದಂತೆ ನಿಗಧಿಪಡಿಸಲಾದ ಪ್ರಮಾಣ ಪತ್ರಗಳನ್ನು ಸಹ ದೃಢೀಕರಿಸಿ ಸಲ್ಲಿಸುವುದು ಸದರಿ ಪೌರಕಾರ್ಮಿಕರನ್ನು ಹೊರತುಪಡಿಸಿ ಇನ್ನಿತರೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ, ವಯಸ್ಸಿಗೆ ಸಂಬಂಧಿಸಿದಂತೆ ನಿಗಧಿಪಡಿಸಲಾದ ಪ್ರಮಾಣ ಪತ್ರಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿಕೊಂಡು ಅವುಗಳನ್ನು ಅರ್ಜಿಯೊಂದಿಗೆ ಲಗತ್ತಿಸಿ ಯೋಜನಾ ನಿರ್ದೇಶಕರ ಕಛೇರಿ, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, 4ನೇ ಮಹಡಿ, ಬೆಂಗಳೂರು ನಗರ ಜಿಲ್ಲೆ, ಇಲ್ಲಿಗೆ ದಿನಾಂಕ: ~~-12-2019~~ 06-01-2020ರ ಸಂಜೆ 5:30 ಗಂಟೆಯೊಳಗೆ ತಲುಪುವಂತೆ ಸಲ್ಲಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು ತಾವು ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು ತಪ್ಪದೇ ನಮೂದಿಸುವುದು. ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

Scanned by CamScanner
Scanned by CamScanner

**ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು :**

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ
2. ಜನ್ಮ ದಿನಾಂಕದ ಧೃಢೀಕರಣಕ್ಕಾಗಿ ಶಾಲಾ ವರ್ಗಾವಣೆ ಪ್ರಮಾಣ ಪತ್ರ / ಜನನ ಪ್ರಮಾಣ ಪತ್ರ / ಆದಾರ್ ಕಾರ್ಡ್/ ಎಸ್.ಎಸ್.ಎಲ್.ಸಿ ಅಂಕಪಟ್ಟಿ
3. ಪೌರಕಾರ್ಮಿಕರ ಹುದ್ದೆಯಲ್ಲಿ ಈಗಾಗಲೇ ಸೇವೆ ಸಲ್ಲಿಸಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಪಡೆದ ಸೇವಾ ಪ್ರಮಾಣ ಪತ್ರ
4. ಕಡಿಮೆ ವರ್ಷ ಸೇವೆ ಸಲ್ಲಿಸಿರುವವರಿಗಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರಿಗೆ ಆದ್ಯತೆ ನೀಡಲಾಗುವುದು . ಈ ಬಗ್ಗೆ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಪಡೆದ ಸೇವಾ ಪ್ರಮಾಣ ಪತ್ರ ಲಗತ್ತಿಸುವುದು..

**ವಿಶೇಷ ಸೂಚನೆಗಳು:-**

- ಅಭ್ಯರ್ಥಿಗಳು ಈ ನೇಮಕಾತಿ ಪ್ರಾಧಿಕಾರ (ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ) ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅರ್ಜಿಗಳನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ಅರ್ಜಿಯನ್ನು ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳಿಂದ ಹಾಗೂ ಈ ಕಾರ್ಯಾಲಯದಿಂದಲೂ ಸಹ ಪಡೆದುಕೊಳ್ಳಬಹುದು.
- ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಬೇಕು ಮತ್ತು ಈಗಾಗಲೇ ಪೌರಕಾರ್ಮಿಕರ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವ ಅಭ್ಯರ್ಥಿಗಳು ಕಡ್ಡಾಯವಾಗಿ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಧೃಢೀಕರಿಸಬೇಕು.
- ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಛೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.
- ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.
- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನ/ಅವಳ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

| | |
|---|---|
| ಯೋಜನಾ ನಿರ್ದೇಶಕರು<br>ಜಿಲ್ಲಾ ನಗರಾಭಿವೃದ್ಧಿ ಕೋಶ<br>ಬೆಂಗಳೂರು ನಗರ ಜಿಲ್ಲೆ. | ಅಧ್ಯಕ್ಷರು,<br>ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ<br>ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ. |

Scanned by CamScanner

Scanned by CamScanner

# ಅರ್ಜಿ ನಮೂನೆ

ಇತ್ತೀಚಿನ ಪಾಸ್ ಪೋರ್ಟ್ ಭಾವಚಿತ್ರ ಅಂಟಿಸಬೇಕು

ಜಿಲ್ಲಾಧಿಕಾರಿಗಳು,
ಬೆಂಗಳೂರು ನಗರ ಜಿಲ್ಲೆ,
ಬೆಂಗಳೂರು.
ಇವರಿಗೆ

ಮಾನ್ಯರೇ,

ಜಿಲ್ಲಾಧಿಕಾರಿಗಳು ಬೆಂಗಳೂರು ನಗರ ಜಿಲ್ಲೆ ಇವರ ಅಧಿಸೂಚನೆ ಸಂಖ್ಯೆ: ಜಿನಕೋ/ಸಾಮಾನ್ಯ-02/ಸಿಆರ್/43/2019-20, ದಿನಾಂಕ: 02-12-2019 ರ ಪ್ರಕಾರ ನಾನು ಕೆಳಕಂಡ ಮಾಹಿತಿಯೊಂದಿಗೆ ಪೌರ ಕಾರ್ಮಿಕರ ಹುದ್ದೆಗೆ ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ .

| | | | | |
|---|---|---|---|---|
| 01 | ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ ) | | | |
| 02 | ತಂದೆ/ಗಂಡನ ಹೆಸರು | | | |
| 04 | ಜನ್ಮ ದಿನಾಂಕ | | | |
| 05 | ವಯಸ್ಸು (ಅಧಿಸೂಚನೆ ಹೊರಡಿಸಿರುವ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು ) | ವರ್ಷಗಳು | ತಿಂಗಳುಗಳು | ದಿನಗಳು |
| 06 | ಅಭ್ಯರ್ಥಿಯ ಖಾಯಂ ವಿಳಾಸ | | | |
| 07 | ಅಂಚೆ ವಿಳಾಸ<br>[Address for correspondence] | | | |
| 08 | ಮೊಬೈಲ್ / ದೂರವಾಣಿ ಸಂಖ್ಯೆ | | | |
| 09 | ಲಿಂಗ | ಪುರುಷ / ಮಹಿಳೆ | | |
| 10 | ರಾಷ್ಟ್ರೀಯತೆ | | | |
| 11 | ಈ ಹಿಂದೆ ಪೌರಕಾರ್ಮಿಕರಾಗಿ ಕೆಲಸ ನಿರ್ವಹಿಸಿದ್ದೀರೇ ? ಇದ್ದಲ್ಲಿ, ಸೇವಾ ದೃಢೀಕರಣ ಪತ್ರವನ್ನು ಸಂಬಂಧಪಟ್ಟ ಪೌರಾಯುಕ್ತರು/ ಮುಖ್ಯಾಧಿಕಾರಿಗಳ ದೃಢೀಕರಿಸಿಕೊಂಡು ಲಗತ್ತಿಸುವುದು. | ಹೌದು | ಇಲ್ಲ | |

<u>ಲಗತ್ತಿಸಿರುವ ದಾಖಲೆಗಳ (ಸಂಖ್ಯೆ):</u>

ಸೂಚನೆ : ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ಸತ್ಯವಾಗಿದ್ದು, ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ಅಭ್ಯರ್ಥಿತ್ವವನ್ನು ತಿರಸ್ಕರಿಸುವ ಷರತ್ತಿಗೆ ಬದ್ಧನಾಗಿರುತ್ತೇನೆ.

ಅಭ್ಯರ್ಥಿಯ ಸಹಿ

ಸ್ಥಳ:

ದಿನಾಂಕ:

Scanned by CamScanner

Scanned by CamScanner